## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Saiganesh Solar Energies Pvt. Ltd., ರವರಿಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕೆರಕಲ್‌ಮಟ್ಟಿ ಗ್ರಾಮದಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಪಾರ್ಕ್ ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 290–ಹೆಚ್(ಎಸ್‌ಜಿ).
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ : 02.11.2016 ರ ಹಂಚಿಕೆ ಸಮಿತಿ ಸಭೆಯ ನಡವಳಿ.

ನವೀಕರಿಸಬಹುದಾದ ಇಂಧನ ... ಬೆಂಗಳೂರು
ನಂ. 4599
ದಿನಾಂಕ 05/11/18

* * *

**ಪ್ರಸ್ತಾವನೆ :-**

M/s Saiganesh Solar Energies Pvt. Ltd., ರವರಿಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕೆರಕಲ್‌ಮಟ್ಟಿ ಗ್ರಾಮದಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಸೋಲಾರ್ ಪಾರ್ಕ್‌ನ್ನು ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಅರ್ಜಿ ಹಾಗೂ ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಕಡತದ ಮೂಲಕ ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಬಾಗಲಕೋಟೆ<br>ತಾಲ್ಲೂಕು : ಬಾದಾಮಿ<br>ಗ್ರಾಮ: ಕೆರಕಲ್‌ಮಟ್ಟಿ |
| ಯೋಜನಾ ಪ್ರದೇಶದ ಸಮೀಪದ ಸಬ್–ಸ್ಟೇಷನ್ ವಿವರ | : | ಹೂಲಗೇರಿ |
| ಯೋಜನಾ ಪ್ರದೇಶದ ವಿವರ | : | **Latitude (N): 16.1307139**<br>**Longitude (E): 75.5793401** |
| CIN ಸಂಖ್ಯೆ | : | U40106KA2014PTC076517 |
| ಯೋಜನಾ ಪ್ರದೇಶದ ವಿಧ | : | ಖಾಸಗಿ ಜಮೀನು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

M/s Saiganesh Solar Energies Pvt. Ltd., ರವರಿಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕೆರಕಲ್‌ಮಟ್ಟಿ ಗ್ರಾಮದಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಖಾಸಗಿ ಸೋಲಾರ್ ಪಾರ್ಕ್‌ನ್ನು ಸ್ಥಾಪಿಸಲು ಅನುಮತಿ ಕೋರಿ ಮೇಲ್ಕಂಡಂತೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಹಂಚಿಕೆ ಸಮಿತಿಯ ಸಭೆಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಸದರಿ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 296 ಎನ್‌ಸಿಇ 2016**
**ಬೆಂಗಳೂರು, ದಿನಾಂಕ: 30.10.2018.**

M/s Saiganesh Solar Energies Pvt. Ltd., ರವರಿಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕೆರಕಲ್‌ಮಟ್ಟಿ ಗ್ರಾಮದಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಖಾಸಗಿ ಸೋಲಾರ್ ಪಾರ್ಕ್‌ನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

MD KREDL

1. **M/s Saiganesh Solar Energies Pvt. Ltd.,** ರವರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪರವಾನಿಗೆ/ಅನುಮತಿ/ಅನುಮೋದನೆಗಳನ್ನು ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ/ಸಕ್ಷಮ ಪ್ರಾಧಿಕಾರಗಳಿಂದ ಪಡೆದುಕೊಳ್ಳತಕ್ಕದ್ದು;

GM (Tech) KREDL
7.11.18
To-SG

...2)

2. M/s Saiganesh Solar Energies Pvt. Ltd., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಪಾವತಿಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಪಾರ್ಕ್‌ನಲ್ಲಿ ಉತ್ಪತ್ತಿಯಾಗುವ ವಿದ್ಯುತ್ತನ್ನು Independent Power Producer (IPP) ವಿಧಾನದಡಿ Solar Power Park Category ಯಡಿ ಸ್ಥಾಪಿಸಿ, ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿಸಿದೆ;
4. M/s Saiganesh Solar Energies Pvt. Ltd., ರವರು ಪ್ರಸ್ತಾಪಿತ ಪಾರ್ಕ್ ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಪಾರ್ಕ್‌ನ್ನು ಸ್ಥಾಪಿಸತಕ್ಕದ್ದು;
5. M/s Saiganesh Solar Energies Pvt. Ltd., ರವರು ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗಾಗಿ ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಪಾವತಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. M/s Saiganesh Solar Energies Pvt. Ltd., ರವರು ಸ್ಥಾಪಿಸುತ್ತಿರುವ ಸೌರ ವಿದ್ಯುತ್ ಪಾರ್ಕ್‌ಗೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ;
7. ಪ್ರಸ್ತಾಪಿತ ಸೌರ ವಿದ್ಯುತ್ ಪಾರ್ಕ್‌ನ್ನು ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

30/11/16

(ಟಿ.ಮಂಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಇಂಧನ ಇಲಾಖೆ,

<u>ಇವರಿಗೆ:</u>
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ, ವಿಕಾಸ ಸೌಧ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ
6. ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
8. ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
9. M/s Saiganesh Solar Energies Pvt. Ltd., Kerkalmatti, Badami Taluk, Bagalkote District.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.